# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 23-03-2021 ಪ್ರಶ್ನೆ ಸಂಖ್ಯೆ : 1670(1965)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಎ. ತಿಪ್ಪೇಸ್ವಾಮಿ(ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 23-03-2021

ಉತ್ತರಿಸುವ ಸಚಿವರು: ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು

ವಿಷಯ : MSME ಕಲ್ಲು ಗಣಿಕಾರಿಕೆಗಳಿಗೆ ಪರವಾನಗಿ ನಿರಾಕರಣೆ ಕುರಿತು

(ಅ) ರಾಜ್ಯದ MSME ಕಲ್ಲು ಗಣಿಕಾರಿಕೆಗಳಿಗೆ 2020 ಮಾರ್ಚ್‌ನಲ್ಲಿ ತಿದ್ದುಪಡಿ ತಂದ ನಂತರ, ಹಳೆಯ ಅರ್ಜಿಗಳಿಗೆ ತಹಶೀಲ್ದಾರ್, ಅಸಿಸ್ಟೆಂಟ್ ಕಮೀಷನರ್, ಜಿಲ್ಲಾಧಿಕಾರಿಗಳು, ಅರಣ್ಯ ಇಲಾಖಾ ನಿರಾಕ್ಷೇಪಣಾ ಪ್ರಮಾಣ ಪತ್ರ ನೀಡಿ, ಟಾಸ್ಕ್‌ಫೋರ್ಸ್ ಸಮಿತಿ ಒಪ್ಪಿಗೆ ನೀಡಿದ ಮನವಿಗಳಿಗೆ ಪರವಾನಗಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ರೀತಿಯ ಎಷ್ಟು ಮನವಿಗಳು ಬಾಕಿ ಉಳಿದಿರುತ್ತವೆ; ಪರವಾನಗಿ ನೀಡದಿರಲು ಕಾರಣವೇನು; ಕಂದಾಯ ಹಾಗೂ ಖಾಸಗಿ ಭೂಮಿಗಳಲ್ಲಿ ಜಿಲ್ಲಾವಾರು ಬಾಕಿಯಿರುವ ಮನವಿಗಳೆಷ್ಟು; (ಮಾಹಿತಿ ನೀಡುವುದು)

(ಇ) ಎಲ್ಲಾ ದಾಖಲೆಗಳು ಸಮರ್ಪಕವಾಗಿದ್ದರೂ ಕೆಲವು ಅರ್ಜಿಗಳನ್ನು ಕಾನೂನುಬಾಹಿರವಾಗಿ ವಜಾ ಮಾಡಿರುವುದರಿಂದ MSME ಕೈಗಾರಿಕೆ ಕಲ್ಲು ಗಣಿ ಕ್ರಷರ್‌ಗಳ ಮಾಲೀಕರು ಬ್ಯಾಂಕ್‌ಗಳಲ್ಲಿ ಸಾಲ ಪಡೆದು, ಮರುಪಾವತಿಸಲಾಗದೆ, ಉದ್ಯೋಗಿಗಳು ಕೆಲಸವಿಲ್ಲದೆ ಜೀವನವು ದುಸ್ತರವಾಗಿರುವುದನ್ನು ಸರ್ಕಾರ ಗಮನಿಸಿದೆಯೇ;

(ಈ) ಈ ನಿಟ್ಟಿನಲ್ಲಿ ಬಾಕಿಯಿರುವ ಮನವಿಗಳನ್ನು ಮರುಪರಿಶೀಲಿಸಿ, ಪರವಾನಗಿ ನೀಡುವ ಬಗ್ಗೆ ಸರ್ಕಾರ ಪರಿಹಾರ ಕ್ರಮಗಳನ್ನು ಕೈಗೊಳ್ಳುವುದೇ? (ಸಂಪೂರ್ಣ ಮಾಹಿತಿ ನೀಡುವುದು)